ಹುಬ್ಬಳ್ಳಿಯಲ್ಲಿರುವ ಸಕ್ಕರೆ ಕಾರ್ಖಾನೆಯ ಹತ್ತಿರ ರಾಜ್ಯ ರಸ್ತೆ ಸಾರಿಗೆಯ ಬಸ್ ನಿಲ್ದಾಣ.

3330 - ಶ್ರೀ ಶಿವಾನಂದ ಎಚ್. ಕೌಜಲಗಿ (ಬೈಲಹೊಂಗಲ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾಂ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನಲ್ಲಿರುವ ಮುಗಟಖಾನ ಹುಬ್ಬಳ್ಳಿಯಲ್ಲಿರುವ ಸಕ್ಕರೆ ಕಾರ್ಖಾನೆಯ ಹತ್ತಿರ (ಬೈ ಪಾಸ್ ರೋಡ್ ಹತ್ತಿರ) ರಾಜ್ಯ ರಸ್ತೆ ಸಾರಿಗೆಯ ಬಸ್ ನಿಲ್ದಾಣದ ಅಗತ್ಯ ಇರುವುದು ಸರ್ಕಾರವ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಸರ್ಕಾರದವರು ಈ ಬಸ್ ನಿಲ್ದಾಣದ ನಿರ್ಮಾಣ ಮಾಡಲು ಕೈಗೊಂಡು ಕ್ರಮವೇನು?

ಇ) ಸಕ್ಕರೆ ಕಾರ್ಖಾನೆಯವರು ಬಸ್ ನಿಲ್ದಾಣದ ನಿರ್ಮಾಣಕ್ಕಾಗಿ ಸ್ಥಳವನ್ನು ಕೊಡಲು ಒಪ್ಪಿಗೆ ನೀಡಿದ್ದರೂ ಕೂಡ ಇದುವರೆವಿಗೂ, ಅಲ್ಲಿ ನಿರ್ಮಾಣದ ಕಾರ್ಯವು ಪ್ರಾರಂಭವಾಗದಿರಲು ಕಾರಣವೇನು?

ಶ್ರೀ ಆಜೀಜ್ ಸೇಠ್ (ಸಾರಿಗೆ ಸಚಿವರು):

ಅ) ಬಂದಿದೆ.

ಆ) ಮಂಡಲ್ ಪಂಚಾಯಿತಿಯವರನ್ನು ಒಂದು ಎಕರೆ ಜಮೀನು ಕೊಡಲು ಕೋರಲಾಗಿದೆ.

ಇ) ಭೂಮಿ ದೊರೆತ ನಂತರ ಈ ಕೆಲಸವನ್ನು ಪ್ರಾರಂಭಿಸಲಾಗುವುದು.

ಬೆಳಗಾವಿ ಜಿಲ್ಲೆಯಲ್ಲಿ ನೀರಾವರಿ ಪಂಪುಸೆಟ್ಟುಗಳಿಗೆ ವಿದ್ಯುಚ್ಛಕ್ತಿ ಸಂಪರ್ಕ

3373 - ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ) : ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಈ ವರ್ಷ ಐ.ಪಿ. ಸೆಟ್ಟುಗಳಿಗೆ ಎಷ್ಟು ವಿದ್ಯುಚ್ಛಕ್ತಿ ಕೊಡಬೇಕೆಂದು ನಿರ್ಧರಿಸಲಾಗಿದೆ? (ಜಿಲ್ಲಾವಾರು ಮಾಹಿತಿ ನೀಡುವುದು)

ಆ) ಬೆಳಗಾಂ ಜಿಲ್ಲೆಯಲ್ಲಿ ಈ ವರ್ಷ ಎಷ್ಟು ನೀರಾವರಿ ಪಂಪು ಸೆಟ್ಟುಗಳಿಗೆ ವಿದ್ಯುಚ್ಛಕ್ತಿ ಸಂಪರ್ಕವನ್ನು ಕೊಡಬೇಕೆಂದು ನಿರ್ಧರಿಸಲಾಗಿದೆ. (ತಾಲ್ಲೂಕು ವಿವರಗಳನ್ನು ನೀಡುವುದು)

ಇ) ವಿಪ್ರಿಲ್ ತಿಂಗಳಿಂದ ಜುಲೈ ಅಂತ್ಯದವರೆಗೆ ಎಷ್ಟು ಐ.ಪಿ. ಸೆಟ್ಟುಗಳಿಗೆ ವಿದ್ಯುತ್ ಸಂಪರ್ಕವನ್ನು ಪ್ರತಿಯೊಂದು ತಾಲ್ಲೂಕಿನಲ್ಲಿ ಕೊಡಲಾಗಿದೆ. ಮತ್ತು ಬೆಳಗಾಂ ಜಿಲ್ಲೆಯ ಪ್ರತಿಯೊಂದು ತಾಲ್ಲೂಕಿನ ಈ ವರ್ಷದ ಗುರಿ ಎಷ್ಟು?

ಈ) ಬೈಲಹೊಂಗಲ ವಿದ್ಯುತ್ ಮಂಡಳಿಯ ಸಹಾಯಕ ಕಾರ್ಯಕಾರಿ ಅಭಿಯಂತರ (ವಿ) ರವರ ಉಪಯೋಗಕ್ಕಾಗಿ ಇವರಿಗೆ ಜೀಪು ಮತ್ತು ಲಾರಿಗಳು ಇಲ್ಲದೇ ಇರುವುದರಿಂದ ಐ.ಪಿ. ಸೆಟ್ ಸಂಪರ್ಕ ಕೊಡಲು ಅತಿ ವಿಳಂಬವಾಗುತ್ತಿರುವ ಸಂಗತಿ ನಿಜವೇ? ಹಾಗಿದ್ದಲ್ಲಿ ಈ ವಾಹನಗಳನ್ನು ಒದಗಿಸಲು ಸರ್ಕಾರದವರು ಯಾವ ಕ್ರಮ ಕೈಗೊಳ್ಳುವರು?

ಉ) ಬೈಲಹೊಂಗಲ ಸಬ್ -ಡಿವಿಷನ್‌ನಲ್ಲಿ ಸುಟ್ಟು ಹೋಗಿರುವ ಟ್ರಾನ್ಸ್‌ಫಾರ್ಮರ್‌ಗಳ ಸಂಖ್ಯೆ ಎಷ್ಟು? ಅವು ಸುಟ್ಟು ಹೋಗಿ ಎಷ್ಟು ದಿನಗಳಾಗಿರುತ್ತವೆ? ಈ ವಿಭಾಗವಲ್ಲಿ ಒಂದು ತಿಂಗಳಿನಿಂದ ವಿದ್ಯುತ್ ಇಲ್ಲದೆ ಇರುವ ಸಂಗತಿ ನಿಜವೇ?